*Two Days Workshop on Feel Employable*

*By*

*Career Guidance Cell & Vidya Poshak, Dharwad*







**Welcome by Dr. Pandit Coordinator, Career Guidance Cell.**




**Inaugural address by Shri.Sudhakar Nayak, Secretary, Kanara College Society, Kumta**







**A Memorandum of Understanding(MOU) between our college and Vdyaposhak is signed by Principal. Dr.P.K.Bhat**







**Resource Person Shri. Girish Nagnoor highlighting the objectives of two days Workshop to the participants**




**Resource Person Venkatesan N. is talking about communication skills**

## ವೃತ್ತಿ ಮಾರ್ಗದರ್ಶನ ಮತ್ತು ಉದ್ಯೋಗಾವಕಾಶಗಳ ಕಾರ್ಯಾಗಾರ

ಕೆನರಾ ಕಾಲೇಜು ಸೊಸೈಟಿಯ ಡಾ.ಎ.ವಿ.ಬಾಳಿಗಾ ಕಲಾ ಮತ್ತು ವಿಜ್ಞಾನ ಮಹಾವಿದ್ಯಾಲಯ ಕುಮಟಾದ ವೃತ್ತಿ ಮಾರ್ಗದರ್ಶನ ಕೋಶ ಮತ್ತು ವಿದ್ಯಾಪೋಷಕ ಧಾರವಾಡ ಇವರ ಜಂಟಿ ಸಹಯೋಗದೊಂದಿಗೆ ದಿನಂಕ: 11 ಮತ್ತು 12 ನೇ ನವೆಂಬರ್ 2021 ರಂದು 2 ದಿನಗಳ ಕಾಲ ಪದವಿ ವಿದ್ಯಾರ್ಥಿಗಳಿಗೆ ಭವಿಷ್ಯದ ವೃತ್ತಿ ಜೀವನಕ್ಕಾಗಿ, ಕೌಶಲ್ಯ ಮತ್ತು ಸಾಮರ್ಥ್ಯ ವೃದ್ಧಿಗಾಗಿ ಉಚಿತ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ವಿದ್ಯಾಪೋಷಕ ಸಂಸ್ಥೆಯು ಪದವಿಯ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ 3 ವರ್ಷ, ದ್ವಿತೀಯ ವರ್ಷದ ವಿದ್ಯಾರ್ಥಿಗಳಿಗೆ 2 ವರ್ಷ ಹಾಗೂ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ 1 ವರ್ಷದ ತರಬೇತಿ ನೀಡುವ ಉದ್ದೇಶ ಹೊಂದಿದೆ.

ಕಾರ್ಯಾಗಾರದ ಉದ್ಘಾಟನಾ ಸಮಾರಂಭವು ದಿನಾಂಕ: 11 ನೇ ನವೆಂಬರ್ 2021ರಂದು ಕಾಲೇಜಿನ ಸಭಾಭವನದಲ್ಲಿ ನಡೆಯಿತು. ಇದೇ ಸಂದರ್ಭದಲ್ಲಿ ವಿದ್ಯಾಪೋಷಕ ಧಾರವಾಡ ಹಾಗೂ ಡಾ.ಎ.ವಿ.ಬಾಳಿಗಾ ಕಲಾ ಮತ್ತು ವಿಜ್ಞಾನ ಮಹಾವಿದ್ಯಾಲಯದ ನಡುವೆ ಒಡಂಬಡಿಕೆಯನ್ನು ಸಹಿ ಹಾಕುವ ಮೂಲಕ ಚಾಲನೆ ನೀಡಲಾಯಿತು. ಸಮಾರಂಭವನ್ನು ಕೆನರಾ ಕಾಲೇಜು ಸೊಸೈಟಿಯ ಕಾರ್ಯದರ್ಶಿಗಳಾದ ಶ್ರೀ.ಸುಧಾಕರ ನಾಯಕ ಅವರು ದೀಪ

ಬೆಳಗಿಸುವ ಮೂಲಕ ಉದ್ಘಾಟಿಸಿದರು. ಕಾಲೇಜಿನ ಪ್ರಾಂಶುಪಾಲರಾದ ಡಾ.ಪಿ.ಕೆ.ಭಟ್‌ರವರು ಸಮಾರಂಭದ ಅಧ್ಯಕ್ಷತೆ ವಹಿಸಿದರು. ಅತಿಥಿಗಳಾಗಿ ಸಂಪನ್ಮೂಲ ವ್ಯಕ್ತಿಗಳಾದ ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿಗಳಾದ ಶ್ರೀ ಗಿರೀಶ ನಾಗನೂರ ವಿದ್ಯಾಪೋಷಕ ಧಾರವಾಡದ ಕಾರ್ಯನಿರ್ವಾಹಕ ನಿರ್ದೇಶಕರಾದ ಶ್ರೀ ವೆಂಕಟೇಶನ್ ಎನ್ ರವರು ಉತ್ತರ ಕನ್ನಡದ ಸಂಯೋಜಕರಾದ ಶ್ರೀ ಕಾರ್ತಿಕ ಹೆಗಡೆಯವರು ಉಪಸ್ಥಿತರಿದ್ದರು.

ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಸಂಸ್ಥೆಯ ಕಾರ್ಯದರ್ಶಿಗಳಾದ ಶ್ರೀ ಸುದಾಕರ ನಾಯಕರವರು ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಉದ್ಯೋಗದ ಅವಶ್ಯಕತೆಯ ಕುರಿತು ಹೇಳುತ್ತಾ ವಿದ್ಯಾರ್ಥಿಗಳು ಸಮಯ ವ್ಯರ್ಥ ಮಾಡದೇ ಕಲಿತು ಉದ್ಯೋಗಿಗಳಾಗುವ ಹಂಬಲ ಹೊಂದಿ ಈ ಕಾರ್ಯಾಗಾರದ ಸದುಪಯೋಗ ಪಡೆದುಕೊಂಡು ಸಂಸ್ಥೆಯ ಕೀರ್ತಿಯನ್ನು ಹೆಚ್ಚಿಸಲು ಪ್ರಯತ್ನಿಸಿ ಎಂದರು. ಹಾಗೆಯೇ ವಿದ್ಯಾಪೋಷಕ ಸಂಸ್ಥೆಯು ವರ್ಷದುದ್ದಕ್ಕೂ ವಿದ್ಯಾರ್ಥಿಗಳಿಗೆ ತರಬೇತಿ ನೀಡುತ್ತಿದ್ದು ಅದಕ್ಕೆ ವಿದ್ಯಾರ್ಥಿಗಳು ಭರಿಸುವ ಶುಲ್ಕದಲ್ಲಿ ಶೇ 10 ನ್ನು ಸಂಸ್ಥೆ ಭರಿಸುವುದಾಗಿ ಭರವಸೆ ನೀಡಿದರು.

ಸಂಪನ್ಮೂಲ ವ್ಯಕ್ತಿಗಳಾದ ಶ್ರೀ ಗಿರೀಶ ನಾಗನೂರ ಅವರು ಮಾತನಾಡಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಹೇಗೆ ಎದುರಿಸಬೆಕು, ಕೌಶಲ್ಯ ಹೆಚ್ಚಿಸಿಕೊಳ್ಳಬೇಕು ಎನ್ನುವ ಕುರಿತು ಸಂಪೂರ್ಣ ಮಾರ್ಗದರ್ಶನ ನೀಡುತ್ತೇವೆ ಎಂದರು. ಇನ್ನೋರ್ವ ಸಂಪನ್ಮೂಲ ವ್ಯಕ್ತಿಗಳಾದ ಶ್ರೀ ವೆಂಕಟೇಶನ್.ಎನ್ ರವರು ಮಾತನಾಡುತ್ತ ಸಂವಹನ ಕಲೆ ಬೆಳೆಸಿಕೊಳ್ಳುವುದು, ಪ್ರೊಫೈಲ್ ಸಿದ್ಧತೆ, ಸಂದರ್ಶನ ಎದುರಿಸುವ ಕುರಿತು ತರಬೇತಿ ನೀಡಲಿದ್ದೇವೆ. ಈವರೆಗೆ ಹತ್ತು ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದುಕೊಂಡಿದ್ದಾರೆ ಎಂದರು.

ಡಾ.ಪಿ.ಕೆ.ಭಟ್‌ರವರು ಅಧ್ಯಕ್ಷಿಯ ನುಡಿಯಲ್ಲಿ ವಿದ್ಯಾಪೋಷಕ ಸಂಸ್ಥೆಯು ಎಷ್ಟೋ ವಿದ್ಯಾಥಿಗಳಿಗೆ ಆರ್ಥಿಕ ಸಹಾಯ ನೀಡಿದೆ.ನಮ್ಮ ಸಂಸ್ಥೆಗೂ ಅದಕ್ಕೂ ಅವಿನಾಬಾವ ಸಂಬಂದವಿದೆ ಕಾರ್ಯಾಗಾರದ ಸದುಪಯೋಗ ಪಡೆದುಕೊಳ್ಳಿ ಎಂದರು. ಕೊನೆಯಲ್ಲಿ ಅತಿಥಿಗಳಿಗೆ ನೆನಪಿನ ಕಾಣಿಕೆ ನೀಡಲಾಯಿತು ಸಮಾರಂಭದಲ್ಲಿ ಎಲ್ಲಾ ಉಪನ್ಯಾಸಕರು ಮತ್ತು ವಿದ್ಯಾತಿಗಳು ಉಪಸ್ಥಿತರಿದ್ದರು.ಬಾಳಿಗಾ ಕಾಲೇಜಿನ ವೃತ್ತಿ ಮಾರ್ಗದರ್ಶನ ಕೋಶ ನ ಸಂಚಾಲಕರಾದ ಡಾ. ಪ್ರಕಾಶ ಪಂಡಿತರವರು ಸಮಾರಂಭಕ್ಕೆ ಎಲ್ಲರನ್ನೂ ಸ್ವಾಗತಿಸುವುದರೊಂದಿಗೆ ಕಾರ್ಯಕ್ರಮದ ನಿರೂಪಕರಾಗಿ ಕಾರ್ಯನಿರ್ವಹಿಸಿದರು.

★★★★★★★★★★★